## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಯು.ಬಿ.ವೆಂಕಟೇಶ್, ಇವರು ನಿಯಮ 330ರಡಿ ಗಮನ ಸೆಳೆದಿರುವ ಸೂಚನೆಗೆ ಹೇಳಿಕೆ.

### ಸೂಚನೆ

ಕರ್ನಾಟಕ ಲೋಕಸೇವಾ ಆಯೋಗವು ಪ್ರತಿ ವರ್ಷ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳದೇ ಇರುವುದರಿಂದ ರಾಜ್ಯದಲ್ಲಿ ನಿರುದ್ಯೋಗಿ ವಿದ್ಯಾವಂತರ ಸಂಖ್ಯೆ ಹೆಚ್ಚಾಗುತ್ತಿದ್ದು, ಅದರಲ್ಲೂ ಕೋವಿಡ್-19 ಸಂದರ್ಭದಲ್ಲಿ ಲೋಕಸೇವಾ ಆಯೋಗವು ತನ್ನ ಕಾರ್ಯ ಚಟುವಟಿಕೆಗಳನ್ನು ಸಂಪೂರ್ಣವಾಗಿ ತಟಸ್ಥಗೊಳಿಸಿದ್ದರಿಂದ ಸಕಾಲದಲ್ಲಿ ನೇಮಕಾತಿ ಪೂರ್ವ ಪರೀಕ್ಷೆಗಳನ್ನು ನಡೆಸುವಲ್ಲಿಯೂ ಸಹ ವಿಫಲವಾಗಿರುತ್ತದೆ. ಆದಕಾರಣ, ತಕ್ಷಣವೇ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೆ.ಪಿ.ಎಸ್.ಸಿ. ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕೆನ್ನುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತಾರೆ.

***

### :: ಹೇಳಿಕೆ ::

ಕರ್ನಾಟಕ ಲೋಕಸೇವಾ ಆಯೋಗವು ನೀಡಿರುವ ಮಾಹಿತಿಯಂತೆ, ಆಯೋಗವು ಆಯ್ಕೆ ಪ್ರಾಧಿಕಾರವಾಗಿದ್ದು ಸರ್ಕಾರದ ವಿವಿಧ ಇಲಾಖೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಆಧರಿಸಿ ವಿವಿಧ ನೇಮಕಾತಿ ನಿಯಮಗಳಡಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಂಡು ಆಯ್ಕೆ ಪಟ್ಟಿಯನ್ನು ಸರ್ಕಾರಕ್ಕೆ/ವಿವಿಧ ಇಲಾಖೆಗಳಿಗೆ ಕಳುಹಿಸಿಕೊಡುವಂತಹ ಮಹತ್ತರ ಕಾರ್ಯವನ್ನು ನಿರ್ವಹಿಸುತ್ತಿದ್ದು, ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಆಯೋಗವು ತನ್ನ ಕಾರ್ಯ ಚಟುವಟಿಕೆಗಳನ್ನು ಸಂಪೂರ್ಣವಾಗಿ ತಟಸ್ಥಗೊಳಿಸಿದ್ದರಿಂದ ಸಕಾಲದಲ್ಲಿ ನೇಮಕಾತಿ ಪೂರ್ವ ಪರೀಕ್ಷೆಗಳನ್ನು ನಡೆಸುವಲ್ಲಿಯೂ ಸಹ ವಿಫಲವಾಗಿರುತ್ತದೆ ಎಂಬ ಅಂಶವು ಸತ್ಯಕ್ಕೆ ದೂರವಾಗಿದ್ದು, ಕೋವಿಡ್-19 ಸಾಂಕ್ರಾಮಿಕ ಪಿಡುಗು ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೂ ಅಸ್ತಿತ್ವದಲ್ಲಿರುತ್ತದೆ. ಇಂತಹ ಸಂದರ್ಭದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗದ ನಿಯಂತ್ರಣಕ್ಕೆ ಸರ್ಕಾರವು ಘೋಷಿಸಿದ ಲಾಕ್‌ಡೌನ್‌ನಂತಹ ಪರಿಸ್ಥಿತಿಯಲ್ಲಿಯೂ ಸಹ ಆಯೋಗವು ಅಗತ್ಯ ಕಾರ್ಯಗಳನ್ನು ನಿರ್ವಹಿಸಿದೆ.

ದೇಶಾದ್ಯಂತ ಕೋವಿಡ್-19 ವ್ಯಾಪಕವಾಗಿ ಹರಡುತ್ತಿದ್ದ ಹಿನ್ನೆಲೆಯಲ್ಲಿ ಎಲ್ಲಾ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದ್ದು, ಸಾರಿಗೆ ವ್ಯವಸ್ಥೆಯನ್ನೂ ಸಹ ಕೆಲವು ಅವಧಿಯವರೆಗೆ ಸ್ಥಗಿತಗೊಳಿಸಲಾಗಿದ್ದುದರಿಂದ ಎಲ್ಲಾ ಶೈಕ್ಷಣಿಕ ಪರೀಕ್ಷೆಗಳನ್ನೂ ಸಹ ಮುಂದೂಡಲಾಗಿರುತ್ತದೆ/ ರದ್ದುಗೊಳಿಸಲಾಗಿರುತ್ತದೆ ಎಂಬ ಅಂಶವನ್ನು ಗಮನಕ್ಕೆ ತರುತ್ತಾ, ಅಭ್ಯರ್ಥಿಗಳ/ಸಾರ್ವಜನಿಕ ಹಿತದೃಷ್ಟಿಯಿಂದ ಕೋವಿಡ್-19 ಅವಧಿಯಲ್ಲಿ ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮಾತ್ರ ಮುಂದೂಡಲಾಗಿರುತ್ತದೆ.

ಒಂದನೇ ಲಾಕ್‌ಡೌನ್ ತೆರವಾದ ನಂತರ ಪ್ರಮುಖ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, ಒಟ್ಟು 02 ಅರ್ಹತಾ ಪಟ್ಟಿ, 14 ತಾತ್ಕಾಲಿಕ ಆಯ್ಕೆ ಪಟ್ಟಿ 30 ಅಂತಿಮ ಆಯ್ಕೆ ಪಟ್ಟಿ ಹಾಗೂ 03 ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಎರಡನೇ ಲಾಕ್‌ಡೌನ್ ಸಂದರ್ಭದಲ್ಲಿಯೂ ಕರ್ನಾಟಕ ಲೋಕಸೇವಾ ಆಯೋಗವು ಕಾರ್ಯನಿರ್ವಹಿಸಿ, 06 ತಾತ್ಕಾಲಿಕ ಆಯ್ಕೆ ಪಟ್ಟಿ 02 ಅಂತಿಮ ಆಯ್ಕೆ ಪಟ್ಟಿ ಹಾಗೂ 01 ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಆಯೋಗವು ಸರ್ಕಾರದ ವಿವಿಧ ಇಲಾಖೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಆಧರಿಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಾಧಿಕಾರಗಳಿಂದ ಪ್ರತಿ ವರ್ಷ ಹುದ್ದೆಗಳ ಭರ್ತಿಗಾಗಿ ಹೊಸ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ಮಾತ್ರ ಆಯೋಗವು ಸಹ ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಹುದ್ದೆಗಳ ಭರ್ತಿಗೆ ಅಧಿಸೂಚನೆಯನ್ನು ಹೊರಡಿಸಿ, ನೇಮಕಾತಿ ಪ್ರಕ್ರಿಯೆಯನ್ನು ಜರುಗಿಸಲು ಅಗತ್ಯ ಕ್ರಮ ವಹಿಸುತ್ತದೆ.

ಸಂ.:ಸಿಆಸುಇ 70 ಎಸ್‌ಎಲ್‌ಎ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ